**<u>ಹೆಚ್ಚುವರಿ ಸಿವಿಲ್ ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳವರ ನ್ಯಾಯಾಲಯ ಚಿಂಚೋಳಿ</u>**

**ಸಿಸಿ ನಂ. 397/2016**

| | | | |
|---|---|---|---|
| **ಹೆಸರು** | : | **ಬಾಬು** | ಚಾ.ಸಾ.3 |
| **ತಂದೆಯ ಹೆಸರು** | : | **ರಾಮು** | ಪ್ರಾ.ಸಾ.2 |
| **ವಯಸ್ಸು** | : | **60 ವರ್ಷ** | ದಿನಾಂಕಃ 01-08-2026 |
| **ಉದ್ಯೋಗ** | : | **ಒಕ್ಕಲುತನ** | |
| **ವಾಸಸ್ಥಳ** | : | **ಪಸ್ತಾಪುರ ತಾಂಡಾ** | |

**ಸಾಕ್ಷಿಗೆ ಪ್ರಮಾಣ ವಚನ ಬೋಧಿಸಲಾಯಿತು.**

**<u>ಮುಖ್ಯ ವಿಚಾರಣೆಃ ಸಹಾಯಕ ಸರಕಾರಿ ಅಭಿಯೋಜಕರಿಂದಃ</u>**

ಈಗ ಸಾಕ್ಷಿದಾರರಿಗೆ ಒಂದು ದಾಖಲೆಯನ್ನು ತೋರಿಸಿ ಸದರಿ ದಾಖಲೆಯೂ ಜಪ್ತಿ ಪಂಚನಾಮೆಯಾಗಿದ್ದು ಅದನ್ನು ನಿಪಿ-2 ಎಂದು ಗುರುತಿಸಿ ಅದರಲ್ಲಿರುವ ಸಾಕ್ಷಿದಾರರ ಸಹಿಯನ್ನು ನಿಪಿ-2(ಎ) ಎಂದು ಗುರುತಿಸಲಾಯಿತು.

ಚಾಸಾ-1 ಮತ್ತು 2ರವರ ಪರಿಚಯವಿದೆ. ಸದರಿ ದಾಖಲೆಗೆ ಯಾವಾಗ ಸಹಿ ಮಾಡಿದ್ದೇನೆ ಅಂತ ಗೊತ್ತಿಲ್ಲ. ಯಾರು ಮಾಡಿಸಿಕೊಂಡಿದ್ದಾರೆ ಅಂತ ಗೊತ್ತಿಲ್ಲ. ಖಾಲಿ ಕಾಗದದ ಮೇಲೆ ಸಹಿ ಮಾಡಿದ್ದೇನೆ. ಸುಮಾರು 8 ರಿಂದ 10 ವರ್ಷಗಳ ಹಿಂದೆ ಪೋಲಿಸರು ಬೆಳಗ್ಗೆ ಪಂಚನಾಮೆ ಮಾಡಿರಬಹುದು ಪೋಲಿಸರು ನಾವು ಬಂದಿದ್ದೇವೆ ಸಹಿ ಮಾಡಿ ಅಂತ ಅಂದಿದಕ್ಕೆ ಸಹಿ ಮಾಡಿದ್ದೇನೆ. ಸದರಿ ಪ್ರಕರಣದ ಬಗ್ಗೆ ನನಗೆ ಮಾಹಿತಿ ಇಲ್ಲ. ಜಾಗದಿಂದ ಪೊಲೀಸರು ಏನನ್ನು ಜಪ್ತಿ ಪಡಿಸಿಲ್ಲ.

(ಈ ಹಂತದಲ್ಲಿ ತನಿಖಾಧಿಕಾರಿಯವರ ಮುಂದೆ ಸಲ್ಲಿಸಿರುವ ಈ ಸಾಕ್ಷಿ ಭಾಗಶಃ ಪ್ರತಿಕೂಲ ಸಾಕ್ಷ್ಯ ನುಡಿಯುತ್ತಿದ್ದು, ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀ ಸವಾಲಿಗೆ ಅನುಮತಿ ಕೊಡುವಂತೆ ಸ.ಸ.ಅ.ರವರು ಅನುಮತಿ ಕೋರುತ್ತಾರೆ. ಸಾಕ್ಷಿಯ ಹೇಳಿಕೆಯನ್ನು ಪರಿಶೀಲಿಸಿ ಅನುಮತಿ ನೀಡಲಾಯಿತು.)

**<u>ಪಾಟೀ ಸವಾಲುಃ ಸಹಾಯಕ ಸರಕಾರಿ ಅಭಿಯೋಜಕರಿಂದಃ</u>**

ದಿನಾಂಕ 15-04-2016ರಂದು ಸಂಜೆ 5 ರಿಂದ 6ಗಂಟೆವರೆಗೆ ನನ್ನ ಮತ್ತು ಚಾಸಾ-2ರವರ ಸಮಕ್ಷಮ ಚಾಸಾ-1ರವರ ತೋರಿಸಿದ ಜಾಗದಲ್ಲಿ ಪೋಲಿಸರು ಪಂಚನಾಮೆ ಜರುಗಿಸಿ ಒಂದು ಕಲ್ಲನ್ನು ಜಪ್ತಿ ಪಡಿಸಿದ್ದರು ಎಂದರೆ ನನಗೆ ಗೊತ್ತಿಲ್ಲ. ಸಾಕ್ಷಿ ಮುಂದುವರೆದು ಇರಬಹುದು ನನಗೆ ಗೊತ್ತಿಲ್ಲ ಎಂದು ನುಡಿಯುತ್ತಾರೆ. ನನಗೆ ಎಲ್ಲಾ ವಿಷಯ ಗೊತ್ತಿದ್ದರು ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

<u>**ಪಾಟೀ ಸವಾಲುಃ ಆರೋಪಿ ಪರವಾಗಿ ಶ್ರೀ VRR ವಕೀಲರಿಂದಃ**</u> ಇಲ್ಲಾ.

**ಮರುವಿಚಾರಣೆಃ ಇಲ್ಲಾ**

**(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಿಸಲಾಯಿತು)**
**ಓ.ಹೇ.ಕೇ. ಸರಿ ಇದೆ.**

**ಪ್ರಭಾರ ಹೆಚ್ಚುವರಿ ಪ್ರ.ದ.ನ್ಯಾ.ದಂ. ಚಿಂಚೋಳಿ**